**ಇಂದೇ ತುರ್ತು ಗಮನಿಸಿ**

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1.

ಸಂಖ್ಯೆ: ಸಿ1(4) ವರ್ಗಾವಣೆ: 01/2010-11 ದಿನಾಂಕ:27-04-2011

ನಿರ್ದೇಶಕರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು
ಆನಂದರಾವ್ ವೃತ್ತ,
ಬೆಂಗಳೂರು.

ಮಾನ್ಯರೆ,

ವಿಷಯ:-ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ಮುಖ್ಯಶಿಕ್ಷಕರ ತತ್ಸಮಾನ ವೃಂದದ ವರ್ಗಾವಣೆ ಆದ್ಯತೆಗೆ ತೀವ್ರತರ ಖಾಯಿಲೆಯೆಂದು ನೀಡುವ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಜಿಲ್ಲಾ ವೈದ್ಯಕೀಯ ಮಂಡಳಿಯಿಂದ ನೀಡುವ ಬಗ್ಗೆ

ಉಲ್ಲೇಖ:1.ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 1 ಶಾಸನ 2007 ದಿನಾಂಕ: 01.09.2007

2.ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 173 ಇಟಿಆರ್2007 ದಿನಾಂಕ:15.10.2007

3.ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 173 ಇಟಿಆರ್2007 ದಿನಾಂಕ:14.11.2007

4.ದಿನಾಂಕ: 09.03.2011ರಂದು ನಡೆದ ಸಭೆಯ ನಡವಳಿ

5.ಈ ಕಛೇರಿಯ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿ:26.04.2011

6.ಈ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ: ಸಿ4(7) ಪ್ರಾ.ಶಾ.ಶಿ. ವರ್ಗ/55/2011-12 ದಿನಾಮಕ: 27.04.2011

******

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ರಡಿಯಲ್ಲಿ ರೂಪಿಸಲಾಗಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007, ರಂತೆ 2011ರ ಎಪ್ರಿಲ್/ಮೇ/ಜೂನ್ ಮಾಹೆಯಲ್ಲಿ ವರ್ಗಾವಣೆ ಮಾಡವ ಸಂಬಂಧ ಮಾರ್ಗ ಸೂಚಿ ಮತ್ತು ವೇಳಾ ಪಟ್ಟಿಯನ್ನು ಉಲ್ಲೇಖ-5 ಮತ್ತು 6ರಂತೆ ಪ್ರಕಟಿಸಲಾಗಿದೆ.

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ [ಶಿಕ್ಷಕರ ವರ್ಗಾವಣೆ ನಿಯಂತ್ರಣ] ಅಧಿನಿಯಮ-2007ರ ಪ್ರಕರಣ 6(4) ರಲ್ಲಿ ಒಬ್ಬ ಶಿಕ್ಷಕನು ಅಥವಾ ಅವನ/ಅವಳ, ಗಂಡ/ಹೆಂಡತಿಯು ಅಥವಾ ಮಕ್ಕಳು ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಲ್ಲಿ ಮತ್ತು ಅದಕ್ಕೆ ವೈದ್ಯಕೀಯ ಚಿಕಿತ್ಸೆಯು ಅವನು/ಅವಳು ಕಾರ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿ ದೊರೆಯದಿದ್ದಲ್ಲಿ ಮತ್ತು ಅವನಿಗೆ/ಅವಳಿಗೆ ವೈದ್ಯಕೀಯ ಚಿಕಿತ್ಸೆ ದೊರೆಯುವಂಥ ಸ್ಥಳಕ್ಕೆ ವರ್ಗಾವಣೆ ಮಾಡುವುದು ಅವಶ್ಯಕವಾಗಿರುವಲ್ಲಿ. ಆದಾಗ್ಯೂ ಚಿಕಿತ್ಸೆಯ ಸ್ವರೂಪ, ಅವನು/ಅವಳು ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ಸಂಬಂಧಪಟ್ಟ ಖಾಯಿಲೆಗೆ ವೈದ್ಯಕೀಯ ಚಿಕಿತ್ಸೆ ದೊರೆಯದಿರುವ ಬಗ್ಗೆ ಮತ್ತು ಅಂಥ ವೈದ್ಯಕೀಯ ಚಿಕಿತ್ಸೆ ದೊರೆಯುವ ಸ್ಥಳದ ಬಗ್ಗೆ ಮತ್ತು ಅವನು /ಅವಳು ಅಗತ್ಯ ವೈದ್ಯಕೀಯ

ಚಿಕಿತ್ಸೆ ಪಡೆಯಲು ಅವರನ್ನು ಅಂಥ ಸ್ಥಳಕ್ಕೆ ವರ್ಗಾವಣೆ ಮಾಡುವುದು ಅವಶ್ಯವಿದೆ, ಎಂಬುದರ ಬಗ್ಗೆ ನಿರ್ದಿಷ್ಟವಾಗಿ ತಿಳಿಸಿರುವ ಜಿಲ್ಲಾ ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಿಕ್ಷಕರು ಹಾಜರುಪಡಿಸದ ಹೊರತು ಅಂಥ ವರ್ಗಾವಣೆಯನ್ನು ಮಾಡತಕ್ಕದ್ದಲ್ಲ ಎಂಬ ನಿಯಮವಿರುತ್ತದೆ. (ಪ್ರತಿ ಲಗತ್ತಿಸಿದೆ)

ಆದ್ದರಿಂದ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ [ಶಿಕ್ಷಕರ ವರ್ಗಾವಣೆ ನಿಯಂತ್ರಣ] ಅಧಿನಿಯಮ-2007ರ ಪ್ರಕರಣ 6(4) ರಂತೆ ಪರೀಕ್ಷಿಸಿ, ಜಿಲ್ಲಾ ವೈದ್ಯಕೀಯ ಮಂಡಳಿಯು ವೈದ್ಯಕೀಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿ ಪಡಿಸಿರುವ ಕೊನೆಯ ದಿನಾಂಕ: 10-05-2011ರೊಳಗೆ ನೀಡಲು ರಾಜ್ಯದ ಎಲ್ಲಾ ಜಿಲ್ಲಾ ವೈದ್ಯಕೀಯ ಮಂಡಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

[ಆಯುಕ್ತರ ಆದೇಶದ ಮೇರೆಗೆ]

ತಮ್ಮ ನಂಬುಗೆಯ

(ಕೆ. ಕೃಷ್ಣೇಗೌಡ)
ಜಂಟಿ ನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಪ್ರತಿಯನ್ನು:-

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ /ಗುಲ್ಬರ್ಗಾ
2. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ)/ (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು, ಜಿಲ್ಲಾ ಆಸ್ಪತ್ರೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
4. ಸಹ ನಿರ್ದೇಶಕರು,-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
5. ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿದೇಶಕರು, ಮೈಸೂರು ವಿಭಾಗ ಮೈಸೂರು.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
7. ಕಛೇರಿ ಪ್ರತಿ.

F:\e-data\C1[4]\Transfer-2011.doc